ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ, ಬೆಂಗಳೂರು – 560 001.

ಸಿ3[1]/ ಸಿ4[1] ಅ.ಶಿ.ನೇ: 04/2014-15 ದಿನಾಂಕ: 17.07.2015

ಜ್ಞಾಪನ

ವಿಷಯ: ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:ಇಡಿ 194.ಎಸ್.ಟಿ.ಬಿ.2013.(ಭಾಗ) ಬೆಂಗಳೂರು .ದಿನಾಂಕ: 17.07.2015

2. ರಾಜ್ಯದ ಜಿಲ್ಲಾ ಉಪನಿರ್ದೇಶಕರು ಇವರ ವರದಿ ಮೇರೆಗೆ

--000--

ಉಲ್ಲೇಖ-1ರ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿ ಮೇರೆಗೆ, ನೇರ ನೇಮಕಾತಿ ಮೂಲಕ ಶಿಕ್ಷಕರನ್ನು ಭರ್ತಿ ಮಾಡಿಕೊಳ್ಳುವವರೆಗೆ ಮಾತ್ರ ಈ ಕೆಳಕಂಡ ಷರತ್ತಿಗೊಳಪಡಿಸಿ, ಸರ್ಕಾರಿ ಪ್ರಾಥಮಿಕ ಶಾಲೆಗಳಿಗಾಗಿ 9511 ಅತಿಥಿ ಶಿಕ್ಷಕರನ್ನು ಹಾಗೂ ಪ್ರೌಢಶಾಲೆಗಳಿಗೆ 1727 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಅನುಮತಿಯನ್ನು ನೀಡಿರುತ್ತಾರೆ ( ಸರ್ಕಾರದ ಆದೇಶದ ಪ್ರತಿಯನ್ನು ಲಗತ್ತಿಸಿದೆ)

ಸರ್ಕಾರದಿಂದ ಮಂಜೂರಾಗಿರುವ ಅತಿಥಿ ಶಿಕ್ಷಕರ ಹುದ್ದೆಗಳಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 9511 ಹುದ್ದೆಗಳನ್ನು ಜಿಲ್ಲಾವಾರು ಹಂಚಿಕೆಮಾಡಿದೆ ಹಾಗೂ ಸರ್ಕಾರಿ ಪ್ರೌಢಶಾಲೆಗಳಿಗೆ 1727 ಹುದ್ದೆಗಳನ್ನು ಜಿಲ್ಲಾವಾರು ಹಂಚಿಕೆ ಮಾಡಿದೆ. (ಅನುಬಂಧದ ಪ್ರತಿ ಲಗತ್ತಿಸಿದೆ.)

ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿನ ಈ ಕೆಳಕಂಡ ಷರತ್ತುಗಳನ್ನು ತಪ್ಪದೇ ಪಾಲಿಸಲು ತಿಳಿಸಿದೆ.

1. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ ಎಲ್ಲಾ ಜಿಲ್ಲೆಗಳಲ್ಲಿ ಸಮಾನವಾಗಿ ಇಲ್ಲದಿರುವುದರಿಂದ ಮತ್ತು ಕೆಲವು ಜಿಲ್ಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡು ಬಂದಿರುವುದರಿಂದ ಶಿಕ್ಷಕರನ್ನು ಮರು ಹಂಚಿಕೆ ಮಾಡಲು ತುರ್ತಾಗಿ ಕ್ರಮ ಕೈಗೊಳ್ಳುವುದು
2. ಶಿಕ್ಷಕರ ನೇಮಕಾತಿ ಹಾಗೂ ಶಾಲಾವಾರು ಹಂಚಿಕೆ ಬಗೆಗಿನ ನೀತಿಗಳನ್ನು ಇಲಾಖೆ ಸುಧಾರಿಸುವ ಕ್ರಮವಾಗಿ ( Rationalite) ಮಾಡುವುದು.
3. ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿದ್ದು, ಅವಶ್ಯಕತೆ ಇರುವ ಕಡೆ ಮರು ಹಂಚಿಕೆಮಾಡುವುದು.
4. ಶಿಕ್ಷಕರ ಸಂಪನ್ಮೂಲವನ್ನು ಹೆಚ್ಚು ಆರ್ಥಿಕವಾಗಿ, ಹೆಚ್ಚು ಪರಿಣಾಮಕಾರಿಯಾಗಿ ಬಳಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
5. ಅನುದಾನಿತ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರನ್ನು ಕೊರತೆ ಇರುವ ಸರ್ಕಾರಿ ಶಾಲೆಗಳಲ್ಲಿ ( O.O.D) ಆಧಾರದ ಮೇಲೆ ಹಂಚಿಕೆ ಮಾಡುವುದು.
6. ಕೊರತೆ ಇರುವ ಶಾಲೆಗಳಿಗೆ ಹೆಚ್ಚುವರಿ ಇರುವ ಶಾಲೆಗಳಿಂದ ಶಿಕ್ಷಕರನ್ನು ಕೂಡಲೇ ಮರು ವಿನ್ಯಾಸಿಸಲು ಕ್ರಮವಹಿಸುವುದು.
7. ಪ್ರಾಥಮಿಕ ಮತ್ತು ಪ್ರೌಢಶಾಲೆಗಳಗೆ ಸಂಬಂದಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ /ಪ್ರೌಢಶಾಲೆಯ ಮುಖ್ಯೋಪಾಧ್ಯಾಯರೇ ಮಾಡುವುದು.
8. ಪ್ರಾಥಮಿಕ ಮತ್ತು ಪ್ರೌಢಶಾಲಾ ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ ನೇಮಿಸುವುದು
9. ನೇಮಕಾತಿಗೆ ಅಧಿಸೂಚಿಸಿದ ಪ್ರಾಥಮಿಕ , ಪ್ರೌಢ ಶಿಕ್ಷಕರು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ತಕ್ಷಣ ಅತಿಥಿ ಶಿಕ್ಷಕರ ಹುದ್ದೆಗಳು ತಂತಾನೆ ರದ್ದಾಗುವುದು.
10. ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗಧಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆಮಾಡುವುದು.

11. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವಧನ ಮಾಹೆಯಾನ ರೂ 5.500/-, ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರ ಗೌರವಧನ ಮಾಹೆಯಾನ ರೂ 6,000/- ನಿಗಧಿಪಡಿಸಲಾಗಿದೆ , ಈ ಹಿಂದಿನ ಸಾಲುಗಳಲ್ಲಿ ಭರಿಸಿದ ಲೆಕ್ಕ ಶೀರ್ಷಿಕೆಯಡಿ ಭರಿಸುವುದು.

12. ಅತಿಥಿ ಶಿಕ್ಷಕರ ಹಾಜರಾತಿ ಕುರಿತು ಪ್ರತ್ಯೇಕ ಹಾಜರಾತಿ ವಹಿಯಲ್ಲಿ ನಿರ್ವಹಿಸುವುದು.

ಮೇಲೆ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಚಾಚೂ ತಪ್ಪದೇ ಪಾಲಿಸಲು ಸಂಬಂಧಿಸಿದ ಉಪನಿರ್ದೇಶಕರು/ ಕ್ಷೇತ್ರಶಿಕ್ಷಣಾಧಿಕಾರಿಗಳು/ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಶಿಕ್ಷಕರಿಗೆ ಈ ಮೂಲಕ ತಿಳಿಸಿದೆ. ಯಾವುದೇ ಲೋಪಗಳಾದಲ್ಲಿ ಸಂಬಂಧಿಸಿದ ಸಿಬ್ಬಂದಿ/ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಈ ಸಂಬಂಧ ಇಲಾಖಾ ವೆಬ್-ಸೈಟ್ ನಲ್ಲಿ ಪ್ರಕಟಣೆ ನೀಡಲಾಗಿದೆ ಹಾಗೂ ನಿಮ್ಮ ಹಂತದಲ್ಲಿ ಸ್ಥಳೀಯ ಪತ್ರಿಕೆಯಲ್ಲಿ ವ್ಯಾಪಕ ಪ್ರಚಾರವನ್ನು ಮಾಡಿ ಲಗತ್ತಿಸಿದ ವೇಳಾಪಟ್ಟಿಯ ಅನುಸಾರವಾಗಿ ಅತಿಥಿ ಶಿಕ್ಷಕರ ಆಯ್ಕೆಗೆ ಕ್ರಮವಹಿಸುವುದು. ಹಾಗೂ ಆಯ್ಕೆಮಾಡಿಕೊಂಡ ಶಿಕ್ಷಕರ ವಿವರವನ್ನು ತಾಲ್ಲೂಕುವಾರು/ಜಿಲ್ಲಾವಾರು ಕ್ರೋಢೀಕರಿಸಿ ಈ ಕಛೇರಿಗೆ ಮರುಟಪಾಲಿನಲ್ಲಿ ಸಲ್ಲಿಸಲು ತಿಳಿಸಿದೆ.

17/7/15

(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

17/7

ಇವರಿಗೆ:-

1. ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರ ಮಾಹಿತಿಗಾಗಿ
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು. ಇವರ ಮಾಹಿತಿಗಾಗಿ
4. ಕಛೇರಿ ಪ್ರತಿ

Athithi_Shik